**MVC-852/2025** **ಪಿ.ಡಬ್ಲ್ಯೂ-1 (ಶಶಿಧರ್ ಜಿ.ಎನ್.)**

ದಿನಾಂಕಃ **27.02.2026** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ಅರ್ಜಿದಾರರ ಪರ ಶ್ರೀ. ಹೆಚ್.ಎಸ್.ವಿ. ವಕೀಲರಿಂದ :**

(ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ, ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ, ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.)

ಪೊಲೀಸರು ಸಲ್ಲಿಸಿದ ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು **ನಿಪಿ-1** ಎಂದು, ದೂರಿನ ದೃಢೀಕೃತ ನಕಲನ್ನು **ನಿಪಿ-2** ಎಂದು, ಫೋಟೋಗಳನ್ನ ಒಳಗೊಂಡ ಸ್ಥಳ ಮಹಜರ್ ನ ದೃಢೀಕೃತ ನಕಲನ್ನು **ನಿಪಿ-3** ಎಂದು, ಐಎಂವಿ ವರದಿಯ ದೃಢೀಕೃತ ನಕಲನ್ನು **ನಿಪಿ-4** ಎಂದು, ಚಾರ್ಜ್ ಶೀಟ್ ನ ದೃಢೀಕೃತ ನಕಲನ್ನು **ನಿಪಿ-5** ಎಂದು, ರಿಪೇರಿ ಬಿಲ್ ನ ನಕಲನ್ನು **ನಿಪಿ-6** ಎಂದು, ಆಧಾರ್ ಕಾರ್ಡಿನ ನಕಲನ್ನು **ನಿಪಿ-7** ಎಂದು, ಪಾಸ್ ಪುಸ್ತಕದ ನಕಲನ್ನು **ನಿಪಿ-8** ಎಂದು ಗುರುತಿಸಲಾಯಿತು.

ಆದ್ದರಿಂದ ನನ್ನ ಅರ್ಜಿಯನ್ನು ಪುರಸ್ಕರಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**2 ನೇ ಎದುರುದಾರರು ಪರ ವಕೀಲರು ಹಾಜರಿದ್ದು, ಪಾಟೀ ಸವಾಲಿಗೆ ಸಮಯಾವಕಾಶವನ್ನು ಕೋರಿದ್ದು, ನ್ಯಾಯದ ಹಿತದೃಷ್ಟಿಯಿಂದ ಪಾಟೀ ಸವಾಲಿಗೆ ಪ್ರಕರಣವನ್ನು ಮುಂದೂಡಲಾಯಿತು.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಈ ದಿನ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇ**

**1 ನೇ ಅಪರ ಹಿರಿಯ ಸಿಜೆ ಮತ್ತು ಎಂಎಸಿಟಿ.,**
**ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**